**ಸಾರ್ವಜನಿಕ ಶಿಕ್ಷಣ ಇಲಾಖೆಯಆಯುಕ್ತರಕಚೇರಿ ಹೊಸ ಸಾರ್ವಜನಿಕ ಕಚೇರಿಗಳು,**
**ನೃಪತುಂಗರಸ್ತೆ,ಕೆ.ಆರ್. ಸರ್ಕಲ್, ಬೆಂಗಳೂರು–560 001**

ಸಂಖ್ಯೆ: ಪ್ರಾಶಿಅ/ಆರ್.ಟಿ.ಇ/ದಾಖಲಾತಿ /473/2015–16 ದಿನಾಂಕ:16–02–2016

ರವರಿಗೆ
ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯಿತಿ
........................................ ಜಿಲ್ಲೆ

ಮಾನ್ಯರೆ,

ವಿಷಯ: ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು–2012 ನಿಯಮ–4(7) ರಅನ್ವಯ2016–17ನೇ ಸಾಲಿಗೆ 1ನೇ ತರಗತಿ ಅಥವಾ ಪೂರ್ವ ಪ್ರಾಥಮಿಕ ಮಕ್ಕಳನ್ನು ದಾಖಲು ಮಾಡಿಕೊಳ್ಳಲು ನೆರೆಹೊರೆ ವ್ಯಾಪ್ತಿಗೆ ಬರುವ ಶಾಲೆಗಳನ್ನು ಗುರುತಿಸಿ ಪ್ರಕಟಿಸುವ ಬಗ್ಗೆ.

ಉಲ್ಲೇಖ: 1. ಉಚಿತ ಮತ್ತುಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ –2009
2. ಕರ್ನಾಟಕಉಚಿತ ಮತ್ತುಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು–2012.
3.ಸರ್ಕಾರದ ಆದೇಶ ಸಂಖ್ಯೆ ಇಡಿ 51 ಪಿಜಿಸಿ 2016, ದಿನಾಂಕ:08–02–2016.

*******

1) ದಿನಾಂಕ: 1–04–2010 ರಿಂದ ಭಾರತ ದೇಶಾದ್ಯಂತ ಜಾರಿಗೆ ಬಂದಿರುವ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ 2009 (ಕೇಂದ್ರ ಕಾಯ್ದೆ ಸಂಖ್ಯೆ 35,2009) ಮತ್ತು ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು 2012 ರೆಡೆಗೆ ತಮ್ಮ ಗಮನವನ್ನು ಸೆಳೆಯಲಾಗಿದೆ.

2) ಈ ಕಾಯ್ದೆಯ ಸೆಕ್ಷನ್ 6ರನ್ವಯ ನೆರೆಹೊರೆ ಪ್ರದೇಶಗಳ ವ್ಯಾಪ್ತಿಯನ್ನು ಗುರುತಿಸಲು ಕರ್ನಾಟಕ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು 2012 ರ ನಿಯಮ 4(1) ರಿಂದ 4(9) ರವರೆಗೆಈ ಕೆಳಗಿನಂತೆ ವಿವರಿಸಲಾಗಿದೆ.

- ಕಾಯಿದೆ ಸೆಕ್ಷನ್ 6, ನಿಯಮ4(1), (ಎ),(ಬಿ)ಮತ್ತು (ಸಿ) ಪ್ರಕಾರ ನೆರೆ ಹೊರೆಯ ಶಾಲೆ ಎಂದರೆ: ಗ್ರಾಮೀಣ ಪ್ರದೇಶದಲ್ಲಿ ಪ್ರಾಥಮಿಕ 1 ರಿಂದ 5 ನೇ ತರಗತಿ ವಿದ್ಯಾರ್ಥಿಗಳಿಗೆ ತಮ್ಮ ವಾಸಸ್ಥಳದಲ್ಲಿ ಅಥವಾ 1 ಕಿ.ಮೀ. ವ್ಯಾಪ್ತಿಯಲ್ಲಿರುವ ಶಾಲೆ, 6, 7 ನೇ ತರಗತಿ ವಿದ್ಯಾರ್ಥಿಗಳಿಗೆ ತಮ್ಮ ವಸತಿ ಪ್ರದೇಶದಲ್ಲಿ ಅಥವಾ 3 ಕಿ.ಮೀ. ವ್ಯಾಪ್ತಿಯಲ್ಲಿರುವ ಶಾಲೆ, 8ನೇ ತರಗತಿಗೆ ತಮ್ಮ ವಾಸಸ್ಥಳದಿಂದ 5 ಕಿ.ಮೀ ವ್ಯಾಪ್ತಿಯಲ್ಲಿರುವ ಯಾವುದಾದರೂ ಶಾಲೆ ಎಂದು ಅರ್ಥ.
- ಕಾಯಿದೆ ಸೆಕ್ಷನ್ 6, ನಿಯಮ 4 (1), (ಎ), (ಬಿ)ಮತ್ತು (ಸಿ) ಪ್ರಕಾರ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ನೆರೆಹೊರೆ ಎಂದರೆ ನಗರಸಭೆ ಅಥವಾ ಸ್ಥಳೀಯ ಪ್ರಾಧಿಕಾರಗಳು ತಮ್ಮ ಆಡಳಿತದ ಉದ್ದೇಶಕ್ಕಾಗಿ ಗುರುತಿಸಲಾದ ಒಂದು ವಾರ್ಡ್ ಎಂದು ಪರಿಗಣಿಸುವುದು.

---2

3) ನೆರೆಹೊರೆ ಶಾಲೆಗಳ ಪಟ್ಟಿಯನ್ನು ಈಗಾಗಲೇ 2012-13ನೇ ಸಾಲಿನಿಂದ ಪ್ರಕಟಿಸುತ್ತಾ ಬಂದಿದ್ದು, ಕೆಲವು ತಾಲ್ಲೂಕುಗಳಲ್ಲಿ ಸಾರ್ವಜನಿಕರಿಂದ ಆಕ್ಷೇಪಣೆಗಳು ಬಂದಿದ್ದು ನಗರ ಪ್ರದೇಶದಲ್ಲಿ ಸಂಬಂಧಿಸಿದ ವಾರ್ಡ್‌ನಿಂದ ಅಗತ್ಯ ದಾಖಲೆ ಪಡೆದು ಸರಿಪಡಿಸಲು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಲಾಗಿದೆ.

4) ಈ ಹಿನ್ನೆಲೆಯಲ್ಲಿ ಈಗಾಗಲೇ ಪ್ರಕಟಿಸಿರುವ ನೆರೆಹೊರೆಯ ಶಾಲೆಗಳ ಪಟ್ಟಿಗೆ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕರಿಂದ ಆಕ್ಷೇಪಣೆ ಆಹ್ವಾನಿಸಿ ಅಂತಿಮ ಪಟ್ಟಿಯನ್ನು ನಿಗದಿತ ದಿನಾಂಕದೊಳಗೆ ಜಿಲ್ಲೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮತೆಗೆದುಕೊಳ್ಳಲು ಸೂಚಿಸಲಾಗಿದೆ.

5) ಮೇಲಿನ ಕಂಡಿಕೆಗಳಲ್ಲಿ ವಿವರಿಸಿದಂತೆ ತಮ್ಮ ಜಿಲ್ಲೆಯಲ್ಲಿ ಒಂದು ನಿರ್ದಿಷ್ಟ ಜನವಸತಿ ಪ್ರದೇಶದ ಮಗುವಿಗೆ 1 ರಿಂದ 8 ನೇ ತರಗತಿವರೆಗೆ ವ್ಯಾಸಂಗ ಮಾಡಲು ಲಭ್ಯವಿರುವ ನೆರೆಹೊರೆಯ ಸರ್ಕಾರಿ ಅನುದಾನಿತ/ಅನುದಾನರಹಿತ ಶಾಲೆಗಳ ಮಾಹಿತಿಯನ್ನು ನಿಗಧಿಪಡಿಸಿರುವ ನಮೂನೆಯಲ್ಲಿ ಸಿದ್ಧಪಡಿಸಿ ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಕಛೇರಿಗಳಲ್ಲಿ ಹಾಗೂ ಶಿಕ್ಷಣ ಇಲಾಖೆಯ ಎಲ್ಲಾ ಕಛೇರಿಗಳ ಪ್ರಕಟಣಾ ಫಲಕಗಳಲ್ಲಿ ಪ್ರಕಟಪಡಿಸುವುದರ ಜೊತೆಗೆ ಈ ಮಾಹಿತಿಯನ್ನು ಸ್ಥಳೀಯ ದಿನಪತ್ರಿಕೆಗಳಲ್ಲಿ ಹಾಗೂ ಜಿಲ್ಲೆಯ ಅಧಿಕೃತ ವೆಬ್ ಸೈಟ್‌ನಲ್ಲಿ ಸಹ **ದಿನಾಂಕ: 21-02-2016**ರೊಳಗೆ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.

ತಮ್ಮ ನಂಬುಗೆಯ

16/2/16

(ಕೆ.ಎಸ್. ಸತ್ಯಮೂರ್ತಿ, ಭಾಆಸೇ)
ಆಯುಕ್ತರು

ಪ್ರತಿಯನ್ನು
ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ನೀಡುತ್ತಾ ಅಗತ್ಯ ಮಾಹಿತಿಗಳನ್ನು ಸಿದ್ಧಪಡಿಸಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆ ಪಡೆದು ದಿನಾಂಕ:21-02-2016 ರೊಳಗೆ ನೆರೆ ಹೊರೆ ಶಾಲೆಗಳ ಮಾಹಿತಿಗಳನ್ನೊಳಗೊಂಡ ಅಂತಿಮ ಪಟ್ಟಿಯನ್ನು ಜಿಲ್ಲೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದೆ. ಅಲ್ಲದೆ ಸದರಿ ಮಾಹಿತಿಯನ್ನು ಈ ಕಾರ್ಯಾಲಯದ ಇ ಗೌರ್ನೆನ್ಸ್ ಘಟಕಕ್ಕೆ ಸಾಫ್ಟ್ ಕಾಪಿಯನ್ನು ಕಳುಹಿಸಿಕೊಡಲು ತಿಳಿಸಿದೆ. ಇ-ಮೇಲ್ ವಿಳಾಸ softwaredevelopment centre@gmail.com